# ನಿಪ್ಪಾಣಿಗೆ ಆಗಮಿಸಿದ ಶರದ್ ಪವಾರ್: ಸ್ವಾಗತ ಕೋರಿದ ಕೈ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ



ಬೆಳಗಾವಿ: ನಿಪ್ಪಾಣಿ ನಗರಕ್ಕೆ ಬಂದಿಳಿದ ರಾಷ್ಟ್ರ ವಾದಿ ಕಾಂಗ್ರೆಸ್ ಪಕ್ಷ ಶದರ್ ಪವಾರ್ ಬಣದ ಅಧ್ಯಕ್ಷರು, ಮಹಾರಾಷ್ಟ್ರದ ಮಾಜಿ ಮುಖ್ಯಮಂತ್ರಿ ಹಾಗೂ ಹಿರಿಯರಾದ ಶ್ರೀ ಶರದಚಂದ್ರ ಪವಾರ ಅವರನ್ನು ಚಿಕ್ಕೋಡಿ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರು ಸ್ವಾಗತಿಸಿದರು.
ಇಂದು ನಿಪ್ಪಾಣಿಯಲ್ಲಿ ನಡೆಯುವ ಎನ್‌ಸಿಪಿ ಮುಖಂಡರ ಸಭೆಗೆ ಆಗಮಿಸಿದ ಶದರ್ ಪವಾರ್ ಅವರನ್ನು ಕೈ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಸ್ವಾಗತ ಕೋರಿ ಆಶೀರ್ವಾದ ಪಡೆದರು. ಈ ವೇಳೆ ಎನ್‌ಸಿಪಿ ನಾಯಕ ಉತ್ತಮ ಪಾಟೀಲ, ಕಾಂಗ್ರೆಸ್ ಮುಖಂಡ ಕಿರಣ ರಜಪೂತ ಹಾಗೂ ಪ್ರಮುಖರು ಉಪಸ್ಥಿತರಿದ್ದರು.



ಬೆಳಗಾವಿ: ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರು ಬುಧವಾರ ಬೈಲಹೊಂಗಲ ತಾಲೂಕಿನ ತಿಗಡಿ ಗ್ರಾಮದ ಶ್ರೀ ಮಹಾಲಕ್ಷ್ಮೀ ಹಾಗೂ ದುರ್ಗಾ ದೇವಿಯರ ಮಂದಿರಕ್ಕೆ ಭೇಟಿ ನೀಡಿ, ದರ್ಶನ ಆಶೀರ್ವಾದ ಪಡೆದರು. ಈ ವೇಳೆ ಗ್ರಾಮಸ್ಥರು, ಕಾರ್ಕಳ ಕಾಂಗ್ರೆಸ್ ಮುಖಂಡ ಉದಯ ಕುಮಾರ್ ಶೆಟ್ಟಿ, ಪಲ್ಲವಿ, ಗ್ರಾಮದ ಮುಖಂಡರಾದ ಬಸವರಾಜ ಜಕಾತಿ, ಬಾಬು ಹೊಸಮನಿ, ಶಿವಾನಂದ ಪಾಟೀಲ, ಅಡಿವೆಪ್ಪ ದಳವಾಯಿ, ಸುರೇಶ ಮುರಗೋಡ, ರಮೇಶ್ ಮೀರಜಕರ್ ಉಪಸ್ಥಿತರಿದ್ದರು.



ಬೆಳಗಾವಿ: ಪ್ರಜ್ವಲ್ ರೇವಣ್ಣ ವೈಯಕ್ತಿಕವಾಗಿ ತಪ್ಪು ಮಾಡಿದ್ದರೆ ಅದಕ್ಕೆ ಸರ್ಕಾರ, ಕಾನೂನು ಕ್ರಮ ಕೈಗೊಳ್ಳಲಿ ಈ ಮೂಲಕ ಬಿಜೆಪಿ ನಾಯಕರು ಮೌನ ವಹಿಸಿದ್ದಾರೆ ಎಂದವರಿಗೆ ಅವರು ಮಾಳವೀಕಾ ಅವಿನಾಶ್ ತಿರುಗೇಟು ನೀಡಿದ್ದಾರೆ. ಬೆಳಗಾವಿಯಲ್ಲಿ ಮಾಳವೀಕಾ ಅವಿನಾಶ್ ಪ್ರಧಾನ ಮೋದಿಯವರ 10 ವರ್ಷಗಳ ಸಾಧನೆ ಹಾಗೂ ರಾಜ್ಯ ಕಾಂಗ್ರೆಸ್ ವೈಫಲ್ಯಗಳ ಆಡೀಯೊ ವಿಡೀಯೊ ಬಿಡುಗಡೆ ಮಾಡಿದ್ದರು.



ಬೆಳಗಾವಿ :ಸೈಯಾದ್ರಿ ನಗರದಲ್ಲಿರುವ ಶ್ರೀ ಮಹಾಲಕ್ಷ್ಮಿ ದೇವಿಯ ವಾರ್ಷಿಕೋತ್ಸವ ಅಂಗವಾಗಿ ಪೂಜೆ ಹೋಮ ಹಾಗೂ ಮಹಾಪ್ರಸಾದದ ಕಾರ್ಯಕ್ರಮ ಏರ್ಪಡಿಸಲಾಗಿತ್ತು ಅದೇ ವೇಳೆ ಅಲ್ಲಿಗೆ ಬೆಳಗಾವಿ ಲೋಕಸಭಾ ಕ್ಷೇತ್ರದ ಭಾರತೀಯ ಜನತಾ ಪಕ್ಷದ ಅಧಿಕೃತ ಅಭ್ಯರ್ಥಿ ಶ್ರೀ ಜಗದೀಶ್ ಶೆಟ್ಟರ್ ಅವರು ಇಂದು ಸೈಯಾದ್ರಿ ನಗರಕ್ಕೆ ಪ್ರಚಾರ ಪ್ರವಾಸ ಕೈಗೊಂಡು ಸ್ಥಳೀಯ ಜನರನ್ನು ಭೇಟಿ ಮಾಡಿ ಚರ್ಚಿಸಿ ಮುಂಬರುವ ಲೋಕಸಭೆ ಚುನಾವಣೆಯಲ್ಲಿ ಭಾರತೀಯ ಜನತಾ ಪಕ್ಷಕ್ಕೆ ನಮ್ಮೆಲ್ಲರ ಅಮೂಲ್ಯ ಮತಗಳನ್ನು ಹಾಕುವಂತೆ ಮನವಿ ಮಾಡಿಕೊಂಡರು ಮತ್ತು ಮೋದಿಯವರನ್ನು 3 ಬಾರಿ ದೇಶದ ಪ್ರಧಾನಿಯನ್ನಾಗಿ ಮಾಡಿ ಎಂದು ಅಲ್ಲಿ ಜನರಿಗೆ ಭರವಸೆಯನ್ನು ನೀಡಿದರು ಇದೆ ವೇಳೆ ದೇವಸ್ಥಾನ ಕಮಿಟಿ ಪಂಚಮಂಡ ಸಹ್ಯಾದ್ರಿನಗರ ನಗರದ ಜನತೆ, ಮುಖಂಡರು ಕಾರ್ಯಕರ್ತರು ಹಿರಿಯರು ನಾಗರಿಕರು ಎಲ್ಲರೂ ಉಪಸ್ಥಿತರಿದ್ದರು..



ಯರಗಟ್ಟಿ: ಬೆಳಗಾವಿ ಲೋಕಸಭಾ ಸಾರ್ವತ್ರಿಕ ಚುನಾವಣೆ–2024 ಹಿನ್ನಲೆಯಲ್ಲಿ ಗ್ರಾಮಕ್ಕೆ ಆಗಮಿಸಿದ ಪ್ಯಾರಾ ಮಿಲಿಟರಿ ಪಡೆ ಮತ್ತು ಪೊಲೀಸ್ ಪಡೆಯಿಂದ ಚುನಾವಣಾ ಮುಂಜಾಗ್ರತಾ ಕ್ರಮವಾಗಿ ಸಮೀಪದ ಸತ್ತಿಗೇರಿ ಗ್ರಾಮದ ನಾನಾ ಕಡೆಗಳಲ್ಲಿ ಬುಧವಾರ ಪಥ ಸಂಚಲನ ನಡೆಸಲಾಯಿತು.ಸ್ಥಳೀಯ ಚನಮ್ಮ ಚೌಕ್‌ದಿಂದ ಪಥ ಸಂಚಲನ ಹೊರಟು ಹಳೆಯ ಅಂಚೆ ಕಚೇರಿ, ಮಳಿಮಲ್ಲೇಶ್ವರ ಮಠ, ಮಸೀದಿ, ಹಳೆ ಬಸ್ ನಿಲ್ದಾಣ ಸೇರಿದಂತೆ ನಾನಾ ಕಡೆಗಳಲ್ಲಿ ಸಂಚರಿಸಿತು.ಪಥ ಸಂಚಲನದಲ್ಲಿ ಸಿ ಆರ್ ಪಿ ಎಫ್ ಪಡೆ ಹಾಗೂ ಪೊಲೀಸ್ ಪಡೆ ಸೇರಿ 150 ಕ್ಕೂ ಹೆಚ್ಚು ಜನ ಪಾಲ್ಗೊಂಡಿದ್ದರು.ಈ ವೇಳೆ ಸಿಪಿಐ ಆಯ್ ಎಂ ಮಠಪತಿ, ಕಮಾಂಡೋ ಆರ್. ಪಿ. ಸಿಂಗ್, ಪಿಎ??? ಆಯ್. ಎಂ. ಹಿರೇಗೌಡರ, ಮಾರ್ಗದರ್ಶನದಲ್ಲಿ ನಡೆದ ಪಥ ಸಂಚಲನದಲ್ಲಿ ಸೇರಿದಂತೆ ಇತರರು ಪಥ ಸಂಚಲನದಲ್ಲಿ ಪಾಲ್ಗೊಂಡಿದ್ದರು.

## ಲೋಕಸಭಾ ಚುನಾವಣೆ: ಕಾಂಗ್ರೆಸ್ ಬೆಂಬಲಿಸಲು ಬಿ.ಆರ್. ಅಂಬೇಡ್ಕರ್ ದಲಿತ ಸಂಘಟನೆಗಳ ಒಕ್ಕೂಟ ಕರೆ

ಬೆಳಗಾವಿ: ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ ರೂಪಿಸಿರುವ ಸಂವಿಧಾನ ಉಳಿಸುವ ಪಕ್ಷಕ್ಕೆ ನಮ್ಮ ಬೆಂಬಲ' ಎಂದು ಡಾ.ಬಿ.ಆರ್ ಅಂಬೇಡ್ಕರ್ ದಲಿತ ಸಂಘಟನೆಗಳ ಒಕ್ಕೂಟ ಹೇಳಿದೆ ಡಾ.ಬಿ.ಆರ್ ಅಂಬೇಡ್ಕರ್ ದಲಿತ ಸಂಘಟನೆಗಳ ಒಕ್ಕೂಟ ದಿಂದ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಮುಖಂಡರು ರಾಜ್ಯದಲ್ಲಿ ಕಾಂಗ್ರೆಸ್ ದಲಿತರಿಗೆ, ಬಡವರಿಗೆ ಅನುಕೂಲವಾಗುವ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿದೆ. ಪಿಟಿಸಿಎಲ್ ಕಾಯ್ದೆಗೆ ಕಾಲಮಿತಿ ಅನ್ವಯಿಸುವುದಿಲ್ಲವೆಂದು ತಿದ್ದುಪಡಿ ಮಾಡಿದೆ. ಆದ್ದರಿಂದ, ಪರಿಶಿಷ್ಟ ಜಾತಿ ಮತ್ತು ಪಂಗಡಕ್ಕೆ ಸೇರಿದ ಎಲ್ಲ ಸಮುದಾಯದವರು ಈ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗಳನ್ನು ಬೆಂಬಲಿಸಬೇಕು' ರಾಜ್ಯದ ಎಲ್ಲ ಲೋಕಸಭಾ ಕ್ಷೇತ್ರಗಳಲ್ಲಿ ಸ್ಪರ್ಧಿಸಿರುವ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗಳಿಗೆ ಮತ ನೀಡಬೇಕು.

ಸಂವಿಧಾನ ಬದಲಾಯಿಸಲು ನಿರ್ಧರಿಸಿರುವ ಬಿಜೆಪಿಯ ಅಭ್ಯರ್ಥಿಗಳನ್ನು ಸೋಲಿಸಬೇಕು. ಎನ್ ಡಿಎ ಮೈತ್ರಿಕೂಟವು ತನ್ನ ಪ್ರಣಾಳಿಕೆಯಲ್ಲಿ ಸುಳ್ಳುಗಳ ಭರವಸೆ ನೀಡಿದ್ದು, ಮತದಾರರನ್ನು ವಂಚಿಸುತ್ತಿದೆ. ಲೋಕಸಭಾ ಚುನಾವಣೆಯಲ್ಲಿ 400 ಸಂಸದರು ಆಯ್ಕೆಯಾದರೆ, ಸಂವಿಧಾನ ಬದಲಾಯಿಸುವ ಹುನ್ನಾರ ನಡೆಸಿದೆ' ಎಂದು ದೂರಿದರು. 'ಬಿಜೆಪಿ ಹಿಂದುಳಿದ ವರ್ಗಗಳಿಗೆ ಮೀಸಲಾತಿ ಸೇರಿದಂತೆ ವಿವಿಧ ವಿಷಯಗಳಲ್ಲಿ ನಿರಂತರವಾಗಿ ಅನ್ಯಾಯ ಮಾಡಿಕೊಂಡು ಬಂದಿದೆ ಎಂದು ಹೇಳಿದ್ದರು

ಸುದ್ದಿಗೋಷ್ಠಿಯಲ್ಲಿ ಮಲ್ಲೇಶ್ ಚೌಗಲೇ, ನಂದಕುಮಾರ್, ಪ್ರಕಾಶ ಬೀರಾವಾರ್, ಮುಕುಂದನ್, ಕೃಷ್ಣದಾಸ್ ನಾರಾಯಣ ದಾಸ ಸೇರಿ ಹಲವರು ಇದ್ದರು

## ಜಿಲ್ಲಾ ಸ್ವೀಪ್ ಸಮಿತಿಯಿಂದ ಮೇ 03 ರಂದು ಪಂಜಿನ ಮೆರವಣಿಗೆ, ಮೇ 04 ರಂದು ಸಾಂಸ್ಕೃತಿಕ ಕಾರ್ಯಕ್ರಮ

ಬಳ್ಳಾರಿ,ಮೇ 02:ಜಿಲ್ಲಾಡಳಿತ, ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಮತದಾನ ಪ್ರಮಾಣ ಹೆಚ್ಚಳ ಹಾಗೂ ನೈತಿಕ ಮತದಾನದ ಕುರಿತು ಅರಿವು ಮೂಡಿಸಲು ಮೇ 03 ರಂದು ಸಂಜೆ 07 ಗಂಟೆಗೆ ಮಹಾನಗರ ಪಾಲಿಕೆ ಕಚೇರಿ ಆವರಣದಿಂದ ಪಂಜಿನ ಮೆರವಣಿಗೆ ಏರ್ಪಡಿಸಲಾಗಿದೆ.

ಪಂಜಿನ ಮೆರವಣಿಗೆಯು ಮಹಾನಗರ ಪಾಲಿಕೆ ಕಚೇರಿ ಆವರಣದಿಂದ ಪ್ರಾರಂಭವಾಗಿ ಬೆಂಗಳೂರು ರಸ್ತೆ, ಬ್ರೂಸ್‌ಪೇಟೆ ಪೊಲೀಸ್ ಠಾಣೆ ಮುಂಭಾಗದಿಂದ ಹೆಚ್.ಆರ್.ಗವಿಯಪ್ಪ ವೃತ್ತದವರೆಗೂ ನಡೆಯಲಿದೆ.

*ಮೇ 04 ರಂದು ಸಾಂಸ್ಕೃತಿಕ ಕಾರ್ಯಕ್ರಮ:*

ಜಿಲ್ಲಾಡಳಿತ, ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಮತದಾನ ಪ್ರಮಾಣ ಹೆಚ್ಚಳ ಹಾಗೂ ಮತದಾನ ಜಾಗೃತಿಗಾಗಿ ಮೇ 04 ರಂದು ಸಂಜೆ 06 ಗಂಟೆಗೆ ನಗರದ ಹೆಚ್.ಆರ್.ಗವಿಯಪ್ಪ ವೃತ್ತ(ಮೋತಿ ವೃತ್ತ)ದ ಬಳಿ ಸಾಂಸ್ಕೃತಿಕ ಕಾರ್ಯಕ್ರಮ ಏರ್ಪಡಿಸಲಾಗಿದೆ ಎಂದು ಜಿಲ್ಲಾ ಸ್ವೀಪ್ ಸಮಿತಿಯ ಅಧ್ಯಕ್ಷರೂ ಆಗಿರುವ ಜಿಪಂ ಸಿಇಒ ರಾಹುಲ್ ಶರಣಪ್ಪ ಸಂಕನೂರ ಅವರು ತಿಳಿಸಿದ್ದಾರೆ.

## ಮೇ 13 ರಂದು ಪಿಂಚಣಿ ಅದಾಲತ್

ಬಳ್ಳಾರಿ,ಮೇ 02: ಕಾರ್ಮಿಕರ ಭವಿಷ್ಯ ನಿಧಿ ಪ್ರಾದೇಶಿಕ ಕಚೇರಿ ಬಳ್ಳಾರಿ ಇವರ ವತಿಯಿಂದ ಪಿಂಚಣಿದಾರರ ಕುಂದುಕೊರತೆಗಳನ್ನು ಆಲಿಸಿ ಪರಿಹಾರ ಒದಗಿಸಲು ಮೇ 13 ರಂದು ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ಬಳ್ಳಾರಿ ಪ್ರಾದೇಶಿಕ ಕಚೇರಿಯಲ್ಲಿ ಪಿಂಚಣಿ ಅದಾಲತ್ ಏರ್ಪಡಿಸಲಾಗಿದೆ.

ಬಳ್ಳಾರಿ, ಕೊಪ್ಪಳ, ವಿಜಯನಗರ ಮತ್ತು ಚಿತ್ರದುರ್ಗ ಜಿಲ್ಲೆಗಳ ಪಿಂಚಣಿದಾರರು ತಮ್ಮ ಕುಂದುಕೊರತೆಗಳಿದ್ದಲ್ಲಿ ಬಳ್ಳಾರಿಯ ಪ್ರಾದೇಶಿಕ ಕಚೇರಿಯ ಸಾರ್ವಜನಿಕ ಸಂಪರ್ಕ ಅಧಿಕಾರಿ, ಇವರಿಗೆ ಪತ್ರ ಅಥವಾ ಇ–ಮೇಲ್ ಮೂಲಕ ತಮ್ಮ ಪಿ.ಪಿ.ಒ ಸಂಖ್ಯೆ ವಿಳಾಸ, ದೂರವಾಣಿ, ಮೊಬೈಲ್ ಸಂಖ್ಯೆ, ಕುಂದು ಕೊರತೆಯ ಸ್ವರೂಪ ಇತ್ಯಾದಿಗಳನ್ನು ಬರೆದು ಪತ್ರ ಮೂಲಕ ಮೇ 10 ರೊಳಗೆ ಕಳುಹಿಸಬಹುದು. ಪತ್ರ, ಲಕೋಟೆಯ ಮೇಲೆ ಪಿಂಚಣಿ ಅದಾಲತ್ ಎಂದು ಬರೆಯಬೇಕು.

ಹೆಚ್ಚಿನ ಮಾಹಿತಿಗಾಗಿ ದೂ.08392–268943 ಗೆ ಸಂಪರ್ಕಿಸಬಹುದು ಎಂದು ಕ್ಷೇತ್ರಿಯ ಭವಿಷ್ಯನಿಧಿ ಆಯುಕ್ತ ಕೆ.ವೆಂಕಟ ಸುಬ್ಬಯ್ಯ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಲೋಕಸಭಾ ಚುನಾವಣೆ ಪ್ರಯುಕ್ತ ವಾ.ಕ.ರ.ಸಾ.ಸಂಸ್ಥೆಯಿಂದ ಹೆಚ್ಚುವರಿ ವಿಶೇಷ ಸಾರಿಗೆ ಸೌಲಭ್ಯ

ಗದಗ ಮೇ 2: ಮೇ 7 ರಂದು ಲೋಕಸಭಾ ಚುನಾವಣೆಗೆ ಮತದಾನ ನಡೆಯಲಿರುವ ಪ್ರಯುಕ್ತ ಮತದಾನಕ್ಕಾಗಿ ಬೆಂಗಳೂರಿನಿಂದ ವಿವಿಧ ಸ್ಥಳಗಳಿಗೆ ತೆರಳುವ ಸಾರ್ವಜನಿಕರಿಗೆ ಸಾರಿಗೆ ಸೇವೆಯಲ್ಲಿ ವ್ಯತ್ಯಯ ಉಂಟಾಗದಂತೆ ಅವಶ್ಯಕ ಸಾರಿಗೆ ಸೌಲಭ್ಯ ಕಲ್ಪಿಸುವ ನಿಟ್ಟಿನಲ್ಲಿ ವಾ.ಕ.ರ.ಸಾ.ಸಂಸ್ಥೆಯ ವ್ಯಾಪ್ತಿಯ ಹುಬ್ಬಳ್ಳಿ, ಧಾರವಾಡ, ಗದಗ, ಬೆಳಗಾವಿ, ಉತ್ತರ ಕನ್ನಡ, ಹಾವೇರಿ, ಚಿಕ್ಕೋಡಿ, ಬಾಗಲಕೋಟೆ ವಿಭಾಗಗಳು ಮತ್ತು ಕ.ರಾ.ರ.ಸಾ.ನಿಗಮದಿಂದ ಸುಮಾರು 400 ಹೆಚ್ಚುವರಿ ವಿಶೇಷ ಸಾರಿಗೆಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.

ಬೆಂಗಳೂರಿನಿಂದ ರಾಜ್ಯ/ಅಂತರರಾಜ್ಯದ ವಿವಿಧ ಸ್ಥಳಗಳಿಗೆ ತೆರಳಲು ಮೇ 3 ರಿಂದ 6 ರವರೆಗೆ ಹೆಚ್ಚುವರಿ ವಿಶೇಷ ಸಾರಿಗೆ ಸೌಲಭ್ಯವನ್ನು ಕಲ್ಪಿಸಲಾಗಿದೆ. ಈ ವಿಶೇಷ ಹೆಚ್ಚುವರಿ ಸಾರಿಗೆಗಳ ಸದುಪಯೋಗ ಪಡೆದುಕೊಳ್ಳುವಂತೆ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಪ್ರಕಟಣೆಯಲ್ಲಿ ತಿಳಿಸಿದೆ.

## ಉಚಿತ ಕೌಶಲ್ಯ ಆಧಾರಿತ ತರಬೇತಿಗೆ ಅರ್ಜಿ ಆಹ್ವಾನ

ಗದಗ ಮೇ 2: ಉತ್ತರ ಕನ್ನಡ ಜಿಲ್ಲೆಯ ಹಳಿಯಾಳದ ಕೆನರಾ ಬ್ಯಾಂಕ್ ಆರ್‌ಸೆಟಿ, ತರಬೇತಿ ಸಂಸ್ಥೆಯಲ್ಲಿ 18 ರಿಂದ 45 ವಯಸ್ಸಿನ ಗ್ರಾಮೀಣ ಭಾಗದ ನಿರುದ್ಯೋಗಿ ಯುವಕ/ಯುವತಿಯರಿಗಾಗಿ ಬರುವ ಮೇ ತಿಂಗಳಿನ ಎರಡನೇ ವಾರದಲ್ಲಿ 30 ದಿನಗಳ ಘರೇಲು ವಿದ್ಯುತ್ ಉಪಕರಣ ಸೇವಾ ಉದ್ಯಮಿ ( ಹೌಸ್ ವೈರಿಂಗ್ ) ತರಬೇತಿ ಪ್ರಾರಂಭವಾಗಲಿದೆ.

ಅಭ್ಯರ್ಥಿಗಳು ತಮ್ಮ ಹೆಸರು, ವಿಳಾಸಗಳನ್ನು ನೊಂದಾಯಿಸಲು ಮೇ 5 ಕೊನೆಯ ದಿನವಾಗಿದ್ದು ಆಸಕ್ತರು ನಿರ್ದೇಶಕರು, ಕೆನರಾ ಬ್ಯಾಂಕ್ ದೇಶಪಾಂಡೆ ಆರ್ ಸೆಟ್ ಸಂಸ್ಥೆ, ಹಳಿಯಾಳ, ಉತ್ತರ ಕನ್ನಡ ಜಿಲ್ಲೆ ಈ ವಿಳಾಸಕ್ಕೆ ಸಂಪರ್ಕಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಮೊ.ಸಂ. 9980510717, 948348549 ಸಂಪರ್ಕಿಸಬಹುದಾಗಿದೆ.

# ಕಸಾಪ 110 ನೇ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮ

ಬೆಳಗಾವಿ:01–ಕನ್ನಡ ಸಾಹಿತ್ಯ ಪರಿಷತ್ತು ಬೆಳಗಾವಿ ಜಿಲ್ಲೆಯ, ಕ.ಸಾ.ಪ 110ನೇ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮವು ರವಿವಾರ ದಿ:05/05/2024 ರಂದು, ಸಮಯ: ಸಂಜೆ: 04:00ಕ್ಕೆ, ಸ್ಥಳ:"ಕನ್ನಡ ಭವನ" ನೆಹರು ನಗರ, ರಾಮದೇವ ಹೊಟೇಲ್ ಹಿಂದೆ ಬೆಳಗಾವಿಯಲ್ಲಿ ನಡೆಯಲಿದೆ.

ಕ.ಸಾ.ಪ. ಬೆಳಗಾವಿ ಜಿಲ್ಲಾಧ್ಯಕ್ಷರಾದ ಶ್ರೀಮತಿ.ಮಂಗಲಾ ಶ್ರೀ ಮೆಟಗುಡ್ಡ ಅಧ್ಯಕ್ಷತೆಯನ್ನು ವಹಿಸಲಿದ್ದಾರೆ. ಬೆಳಗಾವಿಯ ನಿವೃತ್ತ ಮುಖ್ಯೋಪಾಧ್ಯಾಯರು ಶ್ರೀ.ಅಶೋಕ ಉಳ್ಳೆಗಡ್ಡಿ ಅವರು "ಕನ್ನಡ ಸಾಹಿತ್ಯ ಪರಿಷತ್ತಿನ ಸಂಸ್ಥಾಪಕರು" ವಿಷಯದ ಕುರಿತು ಉಪನ್ಯಾಸವನ್ನು ನೀಡಲಿದ್ದಾರೆ. ಬೆಳಗಾವಿಯ ನಿವೃತ್ತ ಅಭಿಯಂತರರು ಶ್ರೀ.ಬಸವರಾಜ ಚೆಟ್ಟೆರ ಹಾಗೂ ಬೆಳಗಾವಿಯ ನಿವೃತ್ತ ನ್ಯಾಯಾಧೀಶರು ಶ್ರೀ.ಉಲ್ಲಾಸ ಬಾಳೇಕುಂದ್ರಿ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ. ಹುಕ್ಕೇರಿಯ ಸಾಹಿತಿಗಳು ಶ್ರೀಮತಿ.ಲೀಲಾವತಿ ರಜಪೂತ ಅತಿಥಿಗಳಾಗಿ ಆಗಮಿಸಲಿದ್ದಾರೆ.

ಶ್ರೀ.ಎಂ.ವೈ.ಮೆಣಸಿನಕಾಯಿ ಅವರು ಪ್ರಾಸ್ತಾವಿಕ ನುಡಿಗಳನ್ನಾಡಲಿದ್ದಾರೆ. ಶ್ರೀಮತಿ.ಸುಧಾ ಪಾಟೀಲ ಸ್ವಾಗತ ಮಾಡಲಿದ್ದಾರೆ. ಶ್ರೀ.ವೀರಭದ್ರಪ್ಪ ಅಂಗಡಿ ಅವರು ಉಪನ್ಯಾಸಕರ ಮತ್ತು ಅತಿಥಿಗಳ ಪರಿಚಯವನ್ನು ಮಾಡಲಿದ್ದಾರೆ. ಶ್ರೀ.ಮಲ್ಲಿಕಾರ್ಜುನ ಕೋಳಿ ಅವರು ಕಾರ್ಯಕ್ರಮವನ್ನು ನಿರೂಪಣೆ ಮಾಡಲಿದ್ದಾರೆ. ಶ್ರೀ.ಸುನೀಲ ಹಲವಾಯಿ ವಂದನಾರ್ಪಣೆಯನ್ನು ಸಲ್ಲಿಸಲಿದ್ದಾರೆ. ಕ.ಸಾ.ಪ. ಬೆಳಗಾವಿ ಜಿಲ್ಲೆಯ ಎಲ್ಲ ತಾಲೂಕಾ ಅಧ್ಯಕ್ಷರುಗಳು, ಹಾಗೂ ಜಿಲ್ಲಾ ಕ.ಸಾ.ಪ. ಕಾರ್ಯಕಾರಿ ಸಮಿತಿಯ ಸರ್ವ ಸದಸ್ಯರು, ಕ.ಸಾ.ಪ. ಸರ್ವ ಸದಸ್ಯರು, ಸಾಹಿತಿಗಳು, ಕಲಾವಿದರು ಮತ್ತು ಕನ್ನಡಪರ ಸಂಘಟನೆಗಳು, ಸಮಸ್ತ ಕನ್ನಡ ಮನಸ್ಸುಗಳು ಎಲ್ಲರೂ ಈ ಕಾರ್ಯಕ್ರಮಕ್ಕೆ ಆಗಮಿಸಿ ಶೋಭೆತ 'ರಬೇಕೆಂದು, ಕಸಾಪ ಬೆಳಗಾವಿ ಜಿಲ್ಲಾಧ್ಯಕ್ಷರಾದ ಶ್ರೀಮತಿ ಮಂಗಲಾ ಶ್ರೀ ಮೆಟಗುಡ್ಡ ವಿನಂತಿಸಿಕೊಂಡಿದ್ದಾರೆ.

## ಅಂಚೆ ಮತದಾನದ ಮೂಲಕ ತಮ್ಮ ಹಕ್ಕನ್ನು ಚಲಾಯಿಸಿದ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿ ರಾಹುಲ ಶಿಂಧೆ



ಚಿಕ್ಕೋಡಿ ಮೇ.: ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿ ಹಾಗೂ ಜಿ.ಪಂ. ಸಿ.ಇ.ಓ ಆದಂತಹ ರಾಹುಲ ಶಿಂಧೆ ಅವರು ಬುಧವಾರ (ಮೇ.1) ರಂದು ಅಂಚೆ ಮತದಾನದ ಮೂಲಕ ತಮ್ಮ ಮತದಾನದ ಹಕ್ಕನ್ನು ಚಲಾಯಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು ಲೋಕಸಭಾ ಚುನಾವಣೆ 2024ರ ಹಿನ್ನಲೆಯಲ್ಲಿ ಅಗತ್ಯ ಸೇವೆಗಳಡಿ ಕಾರ್ಯ ನಿರ್ವಹಿಸುತ್ತಿರುವ ಅಧಿಕಾರಿ ಸಿಬ್ಬಂದಿಗಳಿಗೆ ಅಂಚೆ ಮತದಾನದ ಮೂಲಕ ತಮ್ಮ ಮತದಾನದ ಹಕ್ಕನ್ನು ಚಲಾಯಿಸಲು ಅವಕಾಶ ಕಲ್ಪಿಸಲಾಗಿದೆ.

ಲೋಕಸಭಾ ಚುನಾವಣೆ–2024ಕ್ಕೆ ಸಂಬಂಧಿಸಿದಂತೆ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ವ್ಯಾಪ್ತಿಯಲ್ಲಿನ ಅಗತ್ಯ ಸೇವೆಗಳಡಿ ಬರುವಂತಹ ಅಧಿಕಾರಿ, ಸಿಬ್ಬಂದಿಗಳಿಗೆ ಮತದಾನ ಮಾಡಲು ಅನುಕೂಲವಾಗುವಂತೆ ಚಿಕ್ಕೋಡಿ ತಹಶೀಲ್ದಾರ ಕಚೇರಿಯಲ್ಲಿನ ಕೋರ್ಟ ಹಾಲನಲ್ಲಿ ವ್ಯವಸ್ಥೆ ಮಾಡಲಾಗಿರುತ್ತದೆ.

ಮೇ 1 ರಿಂದ 3 ರ ವರೆಗೆ ಅಗತ್ಯ ಸೇವೆಗಳಡಿ ಬರುವ ನೌಕರರು ಚಿಕ್ಕೋಡಿ ತಹಶೀಲ್ದಾರ ಕಚೇರಿಯ ಕೋರ್ಟ ಹಾಲನಲ್ಲಿ ಸ್ಥಾಪಿಸಲಾಗಿರುವ ಮತಗಟ್ಟೆಗೆ ಮುಂಜಾನೆ 9 ಗಂಟೆಯಿಂದ ಸಾಯಂಕಾಲ 5 ಗಂಟೆಯೊಳಗಾಗಿ ಆಗಮಿಸಿ ತಪ್ಪದೇ ಮತ ಚಲಾಯಿಸುವಂತೆ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿ ರಾಹುಲ ಶಿಂಧೆ ಅವರು ತಿಳಿಸಿದರು.

ಇದೇ ಸಂದರ್ಭದಲ್ಲಿ ಚಿಕ್ಕೋಡಿ ಉಪವಿಭಾಗಾಧಿಕಾರಿಗಳಾದ ಶ್ರೀಮತಿ ಮೆಹಬೂಬಿ ಸೇರಿದಂತೆ ತರಬೇತಿಗೆ ಆಗಮಿಸಿದ ಮತಗಟ್ಟೆ ಅಧಿಕಾರಿ, ಸಿಬ್ಬಂದಿಗಳು ಅಂಚೆ ಮತದಾನದ ಮೂಲಕ ತಮ್ಮ ಹಕ್ಕನ್ನು ಚಲಾಯಿಸಿದರು. ಚಿಕ್ಕೋಡಿ ತಹಶೀಲ್ದಾರ ಚಿದಂಬರ ಕುಲಕರ್ಣಿ ಉಪಸ್ಥಿತರಿದ್ದರು.

## ಲೋಕಸಭೆ ಚುನಾವಣಾ ಜಾಹೀರಾತು– ಪೂರ್ವಾನುಮತಿ ಕಡ್ಡಾಯ: ಜಿಲ್ಲಾ ಚುನಾವಣಾಧಿಕಾರಿ ನಿತೇಶ್ ಪಾಟೀಲ

ಬೆಳಗಾವಿ, ಮೇ : ಲೋಕಸಭೆ ಚುನಾವಣೆ–2024 ಅಂಗವಾಗಿ ಮೇ 7, 2024ರಂದು ಮತದಾನ ನಡೆಯಲಿದೆ. ಈ ಹಿನ್ನೆಲೆಯಲ್ಲಿ ಮೇ 6 ಹಾಗೂ 7 ರಂದು ಅಭ್ಯರ್ಥಿಗಳು/ಸಂಸ್ಥೆಗಳು ಅಥವಾ ಯಾವುದೇ ವ್ಯಕ್ತಿಯು ದಿನಪತ್ರಿಕೆಗಳಲ್ಲಿ ಯಾವುದೇ ರೀತಿಯ ಚುನಾವಣಾ ಜಾಹೀರಾತು ಪ್ರಕಟಿಸಬೇಕಾದರೆ ಸದರಿ ಜಾಹೀರಾತಿಗೆ ಜಿಲ್ಲಾ ಮಟ್ಟದ ಮಾಧ್ಯಮ ಪ್ರಮಾಣೀಕರಣ ಹಾಗೂ ಕಣ್ಗಾವಲು ಸಮಿತಿಯ(ಎಂಸಿಎಂಸಿ) ಕಡೆಯಿಂದ ಪೂರ್ವಾನುಮತಿ ಪಡೆಯುವುದು ಕಡ್ಡಾಯವಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಯೂ ಆಗಿರುವ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ತಿಳಿಸಿದ್ದಾರೆ.

ಚುನಾವಣಾ ಜಾಹೀರಾತು ಪ್ರಕಟಿಸಲು ಬಯಸುವ ಅಭ್ಯರ್ಥಿಗಳು ಮೇ 6 ಹಾಗೂ 7 ರಂದು ಮುದ್ರಣ ಮಾಧ್ಯಮಗಳಲ್ಲಿ ಜಾಹೀರಾತು ಪ್ರಕಟಿಸಬೇಕಾದರೆ ಸದರಿ ಜಾಹೀರಾತಿನ ಎರಡು ಸ್ವಯಂ ದೃಢೀಕೃತ ಪ್ರತಿಗಳೊಂದಿಗೆ ನಿಗದಿತ ಅರ್ಜಿ ನಮೂನೆಯಲ್ಲಿ ಮೇ 4 ರೊಳಗೆ ಜಿಲ್ಲಾ ಮಟ್ಟದ ಮಾಧ್ಯಮ ಪ್ರಮಾಣೀಕರಣ ಹಾಗೂ ಕಣ್ಗಾವಲು ಸಮಿತಿ(ಎಂಸಿಎಂಸಿ)ಗೆ ಅರ್ಜಿ ಸಲ್ಲಿಸಬೇಕು.

ಪೂರ್ವಾನುಮತಿಗೆ ಅರ್ಜಿ ಲಭ್ಯ:

ಮೇ 6 ಹಾಗೂ 7 ರಂದು ಮುದ್ರಣ ಮಾಧ್ಯಮದಲ್ಲಿ ಪ್ರಕಟಿಸಲು ಅಗತ್ಯವಿರುವ ನಿಗದಿತ ನಮೂನೆಯ ಅರ್ಜಿ ನಮೂನೆಗಳು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ 'ವಾರ್ತಾಭವನ' ನ್ಯಾಯಾಲಯ ಆವರಣ, ಬೆಳಗಾವಿ– ಈ ಕಚೇರಿಯಿಂದ ಪಡೆಯಬಹುದು.

ಚುನಾವಣೆಗೆ ಸಂಬಂಧಿಸಿದಂತೆ ಯಾವುದೇ ರೀತಿಯ ಜಾಹೀರಾತುಗಳನ್ನು ಪ್ರಕಟಿಸಲು ಜಿಲ್ಲಾಮಟ್ಟದ ಎಂಸಿಎಂಸಿ ಕಡೆಯಿಂದ ಪೂರ್ವಾನುಮತಿ ಪಡೆಯದ ಅಭ್ಯರ್ಥಿಗಳ ಜಾಹೀರಾತುಗಳನ್ನು ಸ್ಥಳೀಯ, ಜಿಲ್ಲಾ, ರಾಜ್ಯ ಹಾಗೂ ರಾಷ್ಟ್ರಮಟ್ಟದ ದಿನಪತ್ರಿಕೆಗಳು ಪ್ರಕಟಿಸಬಾರದು ಎಂದು ಚುನಾವಣಾ ಆಯೋಗ ತಿಳಿಸಿದೆ ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ತಿಳಿಸಿದ್ದಾರೆ.

## ಕೆ ಪೂರ್ಣಿಮಾ ಅವರಿಗೆ ಸನ್ಮಾನ



ಯಮಕನಮರಡಿ :– ಹಿರಿಯೂರ ಮಾಜಿ ಶಾಸಕಿ ಕೆ.ಪಿ.ಸಿ.ಸಿ ಪ್ರಧಾನ ಕಾರ್ಯದರ್ಶಿ ಕೆ. ಪೂರ್ಣಿಮಾ ಮತ್ತು ಕರ್ನಾಟಕ ರಾಜ್ಯ ಪ್ರವರ್ಗ–1ರ ಜಾತಿಗಳ ಒಕ್ಕೂಟದ ರಾಜ್ಯಾಧ್ಯಕ್ಷ ಡಿ.ಟಿ. ಶ್ರೀನಿವಾಸ ಇವರನ್ನು ಬಸ್ಸಾಪೂರ ಗ್ರಾಮದಲ್ಲಿ ಈ ವೇಳೆಯಲ್ಲಿ ಜಿ.ಪಂ ಮಾಜಿ ಸದಸ್ಯ ಮಂಜುನಾಥ ಪಾಟೀಲ ಬಸ್ಸಾಪೂರ ಗ್ರಾಮಪಂಚಾಯತಿ ಅಧ್ಯಕ್ಷ ಭೀಮಶಿ ಕಳ್ಳಿಮನಿ, ರಾಜುಗೌಡ ಪಾಟೀಲ, ಶೀತಲ ಮುಂಡೆ, ಭರಮಣ್ಣಾ ತೋಳಿ, ಬೆಳಗಾವಿ ಜಿಲ್ಲಾ ಎಸ್.ಸಿ. ಎಸ್.ಟಿ ದೌರ್ಜನ್ಯ ನಿಯಂತ್ರಣ ಸಮಿತಿ ಸದಸ್ಯ ಕರೆಪ್ಪಾ ಗುಡೆನ್ನವರ, ಶಿವಲಿಂಗ ಪೂಜೇರಿ, ಸುವರ್ಣಾ ಮಗದುಮ್ಮ, ಮತ್ತು ಅಪ್ಪಯ್ಯ ಭೀಮರಾಯಿ ಕಳ್ಳಿಮನಿ, ಮಹಾದೇವಿ ಅಪ್ಪಯ್ಯ ಕಳ್ಳಿಮನಿ, ಮತ್ತು ಗ್ರಾಮಸ್ಥರು ಇದ್ದರು.

GADI KANNADIGA,kannada daily, printed, published , edited, & woned by murugesh b.shivapuji ,printed ,plot no:12,sy no:174/3b,press colony,kuvempu nagar, post:hindalaga-591108,Tq & Dt:belgaum, And published at plot no:12,sy no:174/3b,press colony,kuvempu nagar,post:hindalaga-591108,Tq & Dt:belgaum, karnataka, RNI NO:KAR KAN/2003/10452. Permission to post at Belagavi, Kacheri post office Belagavi. No:PMG/KA/NK/BM/743/24-26